# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : 31(07) |
| **ಸದಸ್ಯರ ಹೆಸರು** | : ಶ್ರೀ ಕೆ.ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| **ಉತ್ತರಿಸಬೇಕಾದ ದಿನಾಂಕ** | :12-09-2022 |
| **ಉತ್ತರಿಸಬೇಕಾದ ಸಚಿವರು** | :ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ 14 ವರ್ಷದೊಳಗಿನ 10 ಲಕ್ಷಕ್ಕೂ ಹೆಚ್ಚು ಮಕ್ಕಳು ಅಂಗನವಾಡಿಯಿಂದ ಪ್ರೌಢ ಶಿಕ್ಷಣದವರೆಗೆ ಹೊರಗುಳಿದಿರುವುದು ಇತ್ತೀಚೆಗೆ ನಡೆಸಿದ ಸಮೀಕ್ಷೆಯಲ್ಲಿ ವ್ಯಕ್ತವಾಗಿದ್ದು, ಈ ಕುರಿತು ವರದಿಯನ್ನು ಹೈಕೋರ್ಟ್‌ಗೆ ಸಲ್ಲಿಸಿರುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td rowspan="2">ಬಂದಿದೆ.<br><br>ಅಮಿಕಸ್ ಕ್ಯೂರಿ (Amicus Curiae)ರವರು ದಿನಾಂಕ 01/06/2022ರಂದು ಮಾನ್ಯ ಉಚ್ಚ ನ್ಯಾಯಾಲಯಕ್ಕೆ ಸಲ್ಲಿಸಿದ ವರದಿ ವಿವರ ಈ ಕೆಳಕಂಡಂತಿದೆ.<br><table>
<tr><td>1</td><td>ಶಾಲೆಯಿಂದ ಹೊರಗುಳಿದ ಮಕ್ಕಳ ಒಟ್ಟು ಸಂಖ್ಯೆ (6 ರಿಂದ 14 ವರ್ಷ)</td><td>15,338</td></tr>
<tr><td>2</td><td>ದಾಖಲಾಗದ ಮಕ್ಕಳ ಒಟ್ಟು ಸಂಖ್ಯೆ (6 ರಿಂದ 14)</td><td>10018</td></tr>
<tr><td>3</td><td>ಅಂಗನವಾಡಿಗೆ ದಾಖಲಾಗದ ಮಕ್ಕಳ ಒಟ್ಟು ಸಂಖ್ಯೆ ( 0 ರಿಂದ 3 ವರ್ಷ)</td><td>4,54,238</td></tr>
<tr><td>4</td><td>ಅಂಗನವಾಡಿಗೆ ದಾಖಲಾಗದ ಮಕ್ಕಳ ಒಟ್ಟು ಸಂಖ್ಯೆ (04 ರಿಂದ 06 ವರ್ಷ)</td><td>5,33,206</td></tr>
</table><br>ಶಾಲೆಯಿಂದ ಹೊರಗುಳಿದಿರುವ ಮಕ್ಕಳನ್ನು ಶಾಲೆಗೆ ಮರಳಿ ಕರೆತರಲು ಸರ್ಕಾರ ಈ ಕೆಳಗಿನಂತೆ ಯೋಜನೆಗಳನ್ನು ಹಮ್ಮಿಕೊಂಡಿದೆ.<br>• ವಸತಿರಹಿತ ಶಾಲಾಧಾರಿತ ತರಬೇತಿ, ವಸತಿ ಸಹಿತ ಶಾಲಾಧಾರಿತ ತರಬೇತಿ, ಟೆಂಟ್ ಶಾಲಾ ಕಾರ್ಯಕ್ರಮ, ಕೆ.ಕೆ.ಜಿ.ಬಿ.ವಿ ಮತ್ತು ಕೆ.ಜಿ.ಬಿ.ವಿ ವಿದ್ಯಾರ್ಥಿಗಳ ವಸತಿ ಶಾಲೆಗಳ ಯೋಜನೆ, ಋತುಮಾನ ಶಾಲೆ, ಚಿಣ್ಣರ ಅಂಗಳ, ಬಾ ಬಾಲೆಗೆ ಶಾಲೆಗೆ, ಬಾ ಮರಳಿ ಶಾಲೆಗೆ ಪೋಷಕರ ಸಭೆ, ಪಾಲಕರ ಮನೆಗೆ ಭೇಟಿ.<br>• ವಿಶೇಷ ದಾಖಲಾತಿ ಆಂದೋಲನಾ, ಉಚಿತ ಪಠ್ಯ ಪುಸ್ತಕ, ಸಮವಸ್ತ್ರ, ಮಧಾಹ್ನ ಉಪಹಾರ ಯೋಜನೆ, ಕ್ಷೀರಭಾಗ್ಯ, ಶಿಷ್ಯವೇತನ.</td></tr>
<tr><td>ಆ)</td><td>ಬಂದಿದ್ದಲ್ಲಿ; ಶಾಲೆಯಿಂದ ಹೊರಗುಳಿದಿರುವ ಮಕ್ಕಳನ್ನು ಶಾಲೆಗೆ ಮರಳಿ ಕರೆತರುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ಹಾಗೂ ಈ ಕುರಿತಂತೆ ಸರ್ಕಾರದ ನಿಲುವೇನು? (ವಿವರ ನೀಡುವುದು)</td></tr>
</table>

| | | |
|---|---|---|
| | | ಸೆಂಟರ್ ಫಾರ್ ಇ-ಗವರ್ನೆನ್ಸ್ ಇಲಾಖಾ ವತಿಯಿಂದ ಅಭಿವೃದ್ಧಿ ಪಡಿಸಿರುವ " Karnataka H2H Children Survey App" ಎಂಬ ವಿಶಿಷ್ಟವಾದ Mobile App ಮೂಲಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ನಗರಾಭಿವೃದ್ಧಿ ಮತ್ತು ಪೌರಾಡಳಿತ ಇಲಾಖೆಗಳ ಮೂಲಕ ಮಕ್ಕಳ ಸಮೀಕ್ಷಾ ಕಾರ್ಯ ನಡೆಸಲಾಗಿದೆ. ಈ ಸಮೀಕ್ಷೆಯ ವರದಿ ಆಧರಿಸಿ ಅಮಿಕಸ್ ಕ್ಯೂರಿ (Amicus Curiae) ರವರು 6-14 ವಯೋಮಾನದ 25356 ಮಕ್ಕಳು ಶಾಲೆಯಿಂದ ಹೊರಗುಳಿದಿರುವುದನ್ನು ಮಾನ್ಯ ನ್ಯಾಯಾಲಯಕ್ಕೆ ವರದಿ ಮಾಡಿರುತ್ತಾರೆ. ಶಾಲೆಯಿಂದ ಹೊರಗುಳಿದ ಈ ಮಕ್ಕಳನ್ನು ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ಪ್ರತಿ ದಿನ ಮಕ್ಕಳ ಜಾಡನ್ನು ಹಿಡಿದು ಶಾಲೆಗೆ ಕರೆತರುವ ಸಲುವಾಗಿ ತಂತ್ರಾಂಶ ಆಧಾರಿತ ಮಾಹಿತಿ ಸಂಗ್ರಹಣೆ ಮಾಡಲಾಗುತ್ತಿದೆ. ಅಲ್ಲದೇ, ಕಾಲಕಾಲಕ್ಕೆ ಮೇಲ್ವಿಚಾರಣೆ ಮಾಡಲಾಗುತ್ತಿದೆ. |

**ಸಂಖ್ಯೆ: ಇಪಿ 340 ಪಿಜಿಸಿ 2022**

**(ಬಿ.ಸಿ. ನಾಗೇಶ್)**
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು